ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ಇವರು ನಿಯಮ–72 ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.

**ವಿಷಯ: ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ (ಪಿ.ಡಿ.ಓ)ಗಳ ಕೊರತೆಯಿಂದ ಪಂಚಾಯತಿಗಳ ಆಡಳಿತ ವ್ಯವಸ್ಥೆ ಮತ್ತು ಗ್ರಾಮೀಣ ಪ್ರದೇಶಗಳ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗುತ್ತಿರುವ ವಿಚಾರವಾಗಿ ಮತ್ತು ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ (ಪಿ.ಡಿ.ಓ) ಹುದ್ದೆಗಳನ್ನು ಶೀಘ್ರ ಭರ್ತಿ ಮಾಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.**

ಉತ್ತರ:. ರಾಜ್ಯದಲ್ಲಿ ಈ ಹಿಂದೆ 6021 ಗ್ರಾಮ ಪಂಚಾಯತಿಗಳಿದ್ದು, 12 ಗ್ರಾಮ ಪಂಚಾಯತಿಗಳು ಪಟ್ಟಣ ಪಂಚಾಯತಿ / ಪುರಸಭೆ / ನಗರಸಭೆ ಪರಿವರ್ತನೆಯಾಗಿದ್ದು, ಪ್ರಸ್ತುತ 6009 ಗ್ರಾಮ ಪಂಚಾಯತಿಗಳಿವೆ.

ಗ್ರಾಮ ಪಂಚಾಯತಿಗಳಿಗೆ ಗಣನೀಯ ಪ್ರಮಾಣದ ಜವಾಬ್ದಾರಿಗಳನ್ನು ವಹಿಸಲಾಗಿರುವ ಹಿನ್ನೆಲೆಯಲ್ಲಿ, ಕರ್ತವ್ಯ ನಿರ್ವಹಿಸುತ್ತಿರುವ ಗ್ರಾಮ ಪಂಚಾಯತಿ ಕಾರ್ಯದರ್ಶಿ ಹುದ್ದೆಯ ಜೊತೆಗೆ ಪ್ರತಿ ಗ್ರಾಮ ಪಂಚಾಯತಿಗೆ ಒಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಸೃಜಿಸಿ ನೇಮಕಾತಿ ಮಾಡಲಾಗಿದೆ.

ರಾಜ್ಯದ ಗ್ರಾಮ ಪಂಚಾಯತಿಗಳಿಗೆ ಮಂಜೂರಾದ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ಸಂಖ್ಯೆ:6021.

ಪ್ರಸ್ತುತ ರಾಜ್ಯದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ನೇರ ನೇಮಕಾತಿ ಕೋಟಾದಲ್ಲಿ 3717 ನೌಕರರು ಮತ್ತು ಮುಂಬಡ್ತಿ ಕೋಟಾದಲ್ಲಿ 1563 ನೌಕರರು ಸೇರಿದಂತೆ ಒಟ್ಟು 5280 ನೌಕರರು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.

ಪ್ರಸ್ತುತ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ನೇರ ನೇಮಕಾತಿ ಕೋಟಾದಲ್ಲಿ 205 ಹುದ್ದೆಗಳು ಮತ್ತು ಮುಂಬಡ್ತಿ ಕೋಟಾದಲ್ಲಿ 536 ಹುದ್ದೆಗಳು ಸೇರಿದಂತೆ ಒಟ್ಟು 741 ಹುದ್ದೆಗಳು ಖಾಲಿ ಇರುತ್ತವೆ.

ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನೇಮಕಾತಿ ಪ್ರಾಧಿಕಾರ ಆಗಿದ್ದು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–1 ವೃಂದದ ಅರ್ಹ ನೌಕರರಿಗೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ಮೂಲಕ ಭರ್ತಿ ಮಾಡಲು ಸರ್ಕಾರದಿಂದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

(120)

ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆ ನಿವೃತ್ತಿ, ಅಮಾನತ್ತು, ಇನ್ನಿತರೆ ಕಾರಣಗಳಿಂದ ತೆರವಾದಲ್ಲಿ ಆ ಗ್ರಾಮ ಪಂಚಾಯತಿಯಲ್ಲಿ ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿಯು ಪೂರ್ಣಕಾಲಿಕವಾಗಿ ಕಾರ್ಯನಿರ್ವಹಿಸುತ್ತಿದ್ದಲ್ಲಿ ಪ್ರಭಾರದಲ್ಲಿರಿಸುವುದು. ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿಯು ಇಲ್ಲದಿದ್ದಲ್ಲಿ ನೆರೆಯ ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗೆ ಹೆಚ್ಚುವರಿ ಪ್ರಭಾರ ವಹಿಸಲು ಸರ್ಕಾರದಿಂದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ಕೆಲವು ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮಾನ್ಯ ಸಂಸತ್ ಸದಸ್ಯರು, ರಾಜ್ಯ ಸಭಾ ಸದಸ್ಯರು, ವಿಧಾನ ಸಭೆ / ವಿಧಾನ ಪರಿಷತ್ ಸದಸ್ಯರುಗಳು, ಸಚಿವರುಗಳು ಹಾಗೂ ಜಿಲ್ಲಾ ಪಂಚಾಯತಿ ಅಧ್ಯಕ್ಷರುಗಳ ಕಛೇರಿಗಳಲ್ಲಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯದ ವಿವಿಧ ವಿಭಾಗಗಳು, ಆಯುಕ್ತಾಲಯಗಳು, ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿ ಕಛೇರಿಗಳಲ್ಲಿ ನಿಯೋಜನೆ / ಓಓಡಿ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುತ್ತಾರೆ.

ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 384 ಗ್ರಾಪಂಕಾ 2018 (ಭಾಗ-1) ದಿನಾಂಕ:23-11-2018 ರಲ್ಲಿ ಮಾನ್ಯ ಸಂಸತ್ ಸದಸ್ಯರು, ರಾಜ್ಯ ಸಭಾ ಸದಸ್ಯರು, ವಿಧಾನ ಸಭೆ / ವಿಧಾನ ಪರಿಷತ್ ಸದಸ್ಯರುಗಳು, ಸಚಿವರುಗಳು ಹಾಗೂ ಜಿಲ್ಲಾ ಪಂಚಾಯತಿ ಅಧ್ಯಕ್ಷರುಗಳ ಕಛೇರಿಗಳಲ್ಲಿ ಮಂಜೂರಾದ ಹುದ್ದೆಗೆ ಎದುರಾಗಿ ಕಾರ್ಯನಿರ್ವಹಿಸುತ್ತಿರುವವರನ್ನು ಹೊರತುಪಡಿಸಿ, ಅನ್ಯ ಕಾರ್ಯನಿಮಿತ್ತ (ಓಓಡಿ) ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳ ನಿಯೋಜನೆಗಳನ್ನು ಕೂಡಲೇ ರದ್ದುಪಡಿಸಿ ಮೂಲ ಸ್ಥಾನಗಳಲ್ಲಿ ವರದಿ ಮಾಡಿಕೊಳ್ಳಲು ಆದೇಶಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

**(ಕೆ.ಎಸ್. ಈಶ್ವರಪ್ಪ)**
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.
ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಸಂಖ್ಯೆ: ಗ್ರಾಅಪ 182 ಗ್ರಾಪಂಅ 2021